**<u>ಸಾಕ್ಷಿಯನ್ನು ದಿನಾಂಕಃ 26.11.2025ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಂದುವರೆದ ಪಾಟೀ ಸವಾಲುಃ ವಾದಿ ಪರ ಶ್ರೀ. ಜೆ ಆರ್ ವಕೀಲರಿಂದ:</u>**

ದಾವಾ ಆಸ್ತಿಗಳ ವಿಸ್ತೀರ್ಣ ಮತ್ತು ಚೆಕ್ಕುಬಂದಿ ಸರಿ ಇರುತ್ತದೆ ಎಂದರೆ ಸಾಕ್ಷಿಯು ತನಗೆ ಗೊತ್ತಿಲ್ಲವೆಂದು ನುಡಿಯುತ್ತಾರೆ. ದಿನಾಂಕ 03.05.1991 ರ ನೊಂದಣಿ ವಿಭಾಗದ ನಂತರ ನಮ್ಮ ತಾತನ ಹೆಸರಿನಲ್ಲಿರುವ ಕೆಲವು ದಾಖಲೆಗಳಲ್ಲಿ ಏಕೆ ವಿಭಾಗ ಎಂದು ಬಂದಿರುತ್ತದೆ ಎಂದು ನಾನು ಪರಿಶೀಲನೆ ಮಾಡಿರುವುದಿಲ್ಲ. ನನ್ನ ತಾತ ಜೀವಿತಾವಧಿಯಲ್ಲಿ ಯಾವುದೇ ಆಸ್ತಿ ಸಂಪಾದನೆ ಮಾಡಿಲ್ಲ ಎಂದರೆ ಸಾಕ್ಷಿಯು ತನಗೆ ಗೊತ್ತಿಲ್ಲವೆಂದು ನುಡಿಯುತ್ತಾರೆ. ಈ ದಾವೇಯಲ್ಲಿರುವ ಪಕ್ಷಗಾರರು ಮತ್ತು ಆಸ್ತಿಗಳನ್ನು ಹೊರತುಪಡಿಸಿ ನಮ್ಮ ಕುಟುಂಬಕ್ಕೆ ಬೇರೆ ಯಾವುದೇ ಆಸ್ತಿಗಳು ಇರುವುದಿಲ್ಲ ಮತ್ತು ಬೇರೆ ಯಾವುದೇ ಸದಸ್ಯರು ಇರುವುದಿಲ್ಲ ಎಂದರೆ ಸರಿ. ವಾದಿಗಳಿಗೆ ನನ್ನ ತಾತನ ಜೀವಿತಾವಧಿಯಲ್ಲಿ ಯಾವುದೇ ಭಾಗಾಂಶ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು, 4ನೇ ಪ್ರತಿವಾದಿ ನೀಡಿರುತ್ತಾರೆ ಎಂದು ನುಡಿಯುತ್ತಾರೆ. ನಮ್ಮ ಪಿತ್ರಾರ್ಜಿತ ಆಸ್ತಿಗಳಲ್ಲಿ ವಾದಿಗಳಿಗೆ ಯಾವುದೇ ಆಸ್ತಿ ನೀಡಿಲ್ಲ ಎಂದರೆ ಸರಿ. ನನ್ನ ತಾತ ದಾವಾ ಐಟಂ ನಂ.1,2 ರ ಕುರಿತು ಯಾವುದೇ ದಾಖಲೆ ಮಾಡದೇ ಮರಣ ಹೊಂದಿರುತ್ತಾರೆ ಎಂದರೆ ಸರಿ. ನನ್ನ ತಂದೆ ನನ್ನ ಸಹೋದರಿಗೆ ದಾನ ಮಾಡಿದ ಆಸ್ತಿಗಳು ನಮ್ಮ ಪಿತ್ರಾರ್ಜಿತ ಆಸ್ತಿಯಾದ ಕಾರಣ, ನನ್ನ ತಂದೆಯ ಒಡಹುಟ್ಟಿದವರೆಲ್ಲರಿಗೂ ಅದರಲ್ಲಿ ಹಕ್ಕಿದೆ ಎಂದರೆ ಎಂದರೆ ಸಾಕ್ಷಿಯು ತನಗೆ ಗೊತ್ತಿಲ್ಲವೆಂದು ನುಡಿಯುತ್ತಾರೆ. ದಾವಾ ಐಟಂ ನಂ.1 ಮತ್ತು 2 ರಲ್ಲಿ ವಾದಿಗಳಿಗೆ ಭಾಗಾಂಶದ ಹಕ್ಕಿದೆ ಎಂದರೆ ಎಂದರೆ ಸಾಕ್ಷಿಯು ತನಗೆ ಗೊತ್ತಿಲ್ಲವೆಂದು ನುಡಿಯುತ್ತಾರೆ.

2. ಈ ದಾವೇ ಹೂಡುವ ಮೊದಲು ವಾದಿಗಳು ನನ್ನ ತಂದೆ ಮತ್ತು ಅಜ್ಜಿಯನ್ನು ಭಾಗಾಂಶ ಕೊಡುವಂತೆ ಕೇಳಿದ್ದರು ಎಂದರೆ ಸಾಕ್ಷಿಯು ತನಗೆ ಗೊತ್ತಿಲ್ಲವೆಂದು ನುಡಿಯುತ್ತಾರೆ. ಆ ರೀತಿ ಕೇಳಿದ ನಂತರ ನನ್ನ ತಂದೆ ಮತ್ತು ಅಜ್ಜಿ ಭಾಗಾಂಶ ಕೊಡುವುದಾಗಿ ನಂತರ ನಿರಾಕರಿಸಿದ ಕಾರಣ ಈ ದಾವೇ ಹೂಡಿರುತ್ತಾರೆ ಎಂದರೆ ಸಾಕ್ಷಿಯು ತನಗೆ ಗೊತ್ತಿಲ್ಲವೆಂದು ನುಡಿಯುತ್ತಾರೆ. ನನ್ನ ಅಜ್ಜಿ ಮತ್ತು ತಂದೆ ದಾವಾ ಆಸ್ತಿಗಳನ್ನು ಮಾರಾಟ ಮಾಡಲು ಪ್ರಯತ್ನಿಸಿದಾಗ, ಈ ದಾವೇ ಹೂಡಿರುತ್ತಾರೆ ಎಂದರೆ ಸರಿಯಲ್ಲ. ವಾದಿಗಳಿಗೆ ದಾವಾ ಆಸ್ತಿಗಳಲ್ಲಿ ಭಾಗಾಂಶ ನೀಡಿದ್ದರೆ ನನಗೆ ತೊಂದರೆ ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗಳು ವಾದಿಗಳ ಮತ್ತು ನನ್ನ ತಂದೆಯ ಪಿತ್ರಾರ್ಜಿತ ಆಸ್ತಿಗಳಾಗಿದ್ದು, ಅವುಗಳಲ್ಲಿ ವಾದಿಗಳಿಗೆ ಹಕ್ಕಿದೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

*( ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು .)*

ಓ. ಹೇ.ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ .ದಂ .
ಕುಣಿಗಲ್.